## 2003 ರ ಕರ್ನಾಟಕ ಅಧಿನಿಯಮ ಸಂಖ್ಯೆ 29

## ಕರ್ನಾಟಕ ಧನವಿನಿಯೋಗ (ಸಂಖ್ಯೆ 3) ಅಧಿನಿಯಮ, 2003

### ಪ್ರಕರಣಗಳ ಪಟ್ಟಿ

**ಪ್ರಕರಣಗಳು**

1. ಸಂಕ್ಷಿಪ್ತ ಹೆಸರು

2. ಕರ್ನಾಟಕ ರಾಜ್ಯದ ಸಂಚಿತ ನಿಧಿಯಿಂದ 2003-2004ನೇ ಹಣಕಾಸು ವರ್ಷಕ್ಕಾಗಿ 816,47,09,000 ರೂಪಾಯಿಗಳ ನೀಡಿಕೆ

3. ಧನವಿನಿಯೋಗ

### ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

2003-2004 ನೇ ಹಣಕಾಸು ವರ್ಷದಲ್ಲಿ ಸಂದಾಯ ಮಾಡುವಾಗ ಒದಗಿಬರುವ ಹಲವಾರು ಖರ್ಚುಗಳನ್ನು ವಹಿಸುವುದಕ್ಕಾಗಿ ಅಗತ್ಯವಿರುವ ಮತ್ತಷ್ಟು ಹಣವನ್ನು ರಾಜ್ಯದ ಸಂಚಿತ ನಿಧಿಯೊಳಗಿನಿಂದ ವಿನಿಯೋಗಿಸಲು ಭಾರತ ಸಂವಿಧಾನದ 205 ನೇ (1)(ಎ) ಅನುಚ್ಛೇದದ ಉಪಬಂಧಗಳಿಗನುಸಾರವಾಗಿ ಈ ವಿಧೇಯಕವನ್ನು ಮಂಡಿಸಲಾಗಿದೆ.

[2003ರ ವಿಧಾನ ಸಭೆಯ ವಿಧೇಯಕ ಸಂಖ್ಯೆ 21]

(ಭಾರತ ಸಂವಿಧಾನದ 204ನೇ ಅನುಚ್ಛೇದ)

## 2003 ರ ಕರ್ನಾಟಕ ಅಧಿನಿಯಮ ಸಂಖ್ಯೆ 29

*(2003 ರ ಆಗಸ್ಟ್ ಹದಿನಾರನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)*

## ಕರ್ನಾಟಕ ಧನವಿನಿಯೋಗ (ಸಂಖ್ಯೆ 3) ಅಧಿನಿಯಮ, 2003

*(2003 ರ ಆಗಸ್ಟ್ ಹದಿಮೂರನೇ ದಿನಾಂಕದಂದು ಕರ್ನಾಟಕ ರಾಜ್ಯಪಾಲರ ಅನುಮತಿಯನ್ನು ಪಡೆಯಲಾಗಿದೆ)*

2003-2004 ನೇ ಹಣಕಾಸು ವರ್ಷದ ಸೇವೆಗಳಿಗಾಗಿ ಕರ್ನಾಟಕ ರಾಜ್ಯದ ಸಂಚಿತ ನಿಧಿಯಿಂದ ಮತ್ತು ಅದರೊಳಗಿಂದ ಕೆಲವು ಮೊತ್ತಗಳ ಸಂದಾಯ ಮತ್ತು ವಿನಿಯೋಗಕ್ಕಾಗಿ ಅಧಿಕಾರ ನೀಡಲು ಒಂದು ಅಧಿನಿಯಮ.

2003-2004 ನೇ ಹಣಕಾಸು ವರ್ಷದ ಸೇವೆಗಳಿಗಾಗಿ ಕರ್ನಾಟಕ ರಾಜ್ಯದ ಸಂಚಿತ ನಿಧಿಯಿಂದ ಮತ್ತು ಆ ಪೈಕಿಯಿಂದ ಕೆಲವು ಮೊತ್ತಗಳ ಸಂದಾಯ ಮತ್ತು ವಿನಿಯೋಗಕ್ಕಾಗಿ ಅಧಿಕಾರ ನೀಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಐವತ್ನಾಲ್ಕನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಕೆಳಕಂಡಂತೆ ಅಧಿನಿಯಮಿತವಾಗಲಿ, ಎಂದರೆ.-

1. **ಸಂಕ್ಷಿಪ್ತ ಹೆಸರು.-** ಈ ಅಧಿನಿಯಮವನ್ನು ಕರ್ನಾಟಕ ಧನವಿನಿಯೋಗ (ಸಂಖ್ಯೆ. 3) ಅಧಿನಿಯಮ, 2003 ಎಂದು ಕರೆಯತಕ್ಕದ್ದು.

2. **ಕರ್ನಾಟಕ ರಾಜ್ಯದ ಸಂಚಿತ ನಿಧಿಯಿಂದ 2003-2004ನೇ ಹಣಕಾಸು ವರ್ಷಕ್ಕಾಗಿ 816,47,09,000 ರೂಪಾಯಿಗಳ ನೀಡಿಕೆ.-** ಅನುಸೂಚಿಯ 2ನೇ ಅಂಕಣದಲ್ಲಿ ನಿರ್ದಿಷ್ಟಪಡಿಸಲಾದ ಸೇವೆಗಳ ಸಂಬಂಧದಲ್ಲಿ, 2003-2004ನೇ ಹಣಕಾಸು ವರ್ಷದಲ್ಲಿ ಸಂದಾಯ ಮಾಡುವಾಗ ಒದಗಿ ಬರುವ ಹಲವಾರು ಖರ್ಚುಗಳನ್ನು ವಹಿಸುವುದಕ್ಕಾಗಿ ಅನುಸೂಚಿಯ 5ನೇ ಅಂಕಣದಲ್ಲಿ ನಿರ್ದಿಷ್ಟಪಡಿಸಲಾಗಿದ್ದ ಮೊತ್ತದಲ್ಲಿ **ಎಂಟುನೂರ ಹದಿನಾರು ಕೋಟಿ ನಲ್ವತ್ತೇಳು ಲಕ್ಷದ ಒಂಭತ್ತು ಸಾವಿರ ರೂಪಾಯಿಗಳಿಗೆ** ಮೀರದಷ್ಟು ಮೊಬಲಗನ್ನು ಮಾತ್ರ ಕರ್ನಾಟಕ ರಾಜ್ಯದ ಸಂಚಿತ ನಿಧಿಯಿಂದ ಮತ್ತು ಅದರೊಳಗಿಂದ ಸಂದಾಯ ಮಾಡತಕ್ಕದ್ದು ಮತ್ತು ಉಪಯೋಗಿಸತಕ್ಕದ್ದು.

3. **ಧನವಿನಿಯೋಗ.-** ಈ ಅಧಿನಿಯಮದ ಮೂಲಕ, ಕರ್ನಾಟಕ ರಾಜ್ಯದ ಸಂಚಿತ ನಿಧಿಯಿಂದ ಮತ್ತು ಅದರೊಳಗಿಂದ ಸಂದಾಯ ಮಾಡಲು ಮತ್ತು ಉಪಯೋಗಿಸಲು ಅಧಿಕಾರ ನೀಡಲಾದ ಮೊತ್ತಗಳನ್ನು ಸದರಿ ವರ್ಷಕ್ಕೆ ಸಂಬಂಧಪಟ್ಟಂತೆ ಅನುಸೂಚಿಯಲ್ಲಿ ತಿಳಿಸಲಾದ ಸೇವೆಗಳು ಮತ್ತು ಉದ್ದೇಶಗಳಿಗಾಗಿ ವಿನಿಯೋಗಿಸತಕ್ಕದ್ದು.

---

ಕರ್ನಾಟಕ ರಾಜ್ಯ ಪತ್ರದ ಭಾಗ IVಎ ವಿಶೇಷ ಪತ್ರಿಕೆ ಸಂಖ್ಯೆ: 939 ದಿನಾಂಕ: 16.8.2003 ರಲ್ಲಿ ಪ್ರಕಟಿತ
ಕಡತ ಸಂಖ್ಯೆ: ಸಂವ್ಯಶಾಇ 50 ಶಾಸನ 2003

**ಅನುಸೂಚಿ**

**(2 ಮತ್ತು 3ನೇ ಪ್ರಕರಣಗಳನ್ನು ನೋಡಿ)**

(ರೂ. ಲಕ್ಷಗಳಲ್ಲಿ)

| ಬೇಡಿಕೆ ಸಂಖ್ಯೆ | ಸೇವೆಗಳು ಮತ್ತು ಉದ್ದೇಶಗಳು | | ಮೀರದ ಮೊಬಲಗು | | ಒಟ್ಟು |
|---|---|---|---|---|---|
| | | | ಸಂಚಿತ ನಿಧಿಯಿಂದ ಪ್ರಭೃತ ವಾದುದನ್ನು | ವಿಧಾನ ಸಭೆಯಿಂದ ಪುರಸ್ಕೃತ ವಾದುದನ್ನು | |
| 02 | ಪಶು ಸಂಗೋಪನೆ ಮತ್ತು ಮೀನುಗಾರಿಕೆ | ರಾಜಸ್ವ | - | 111.70 | 111.70 |
| 03 | ಆರ್ಥಿಕ | ರಾಜಸ್ವ<br>ಬಂಡವಾಳ | - | 2202.50<br>1800.00 | 2202.50<br>1800.00 |
| 05 | ಒಳಾಡಳಿತ ಮತ್ತು ಸಾರಿಗೆ | ಬಂಡವಾಳ | - | 2000.00 | 2000.00 |
| 06 | ಮೂಲಭೂತ ಸೌಕರ್ಯ | ರಾಜಸ್ವ<br>ಬಂಡವಾಳ | - | 45.00<br>200.00 | 45.00<br>200.00 |
| 07 | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ | ರಾಜಸ್ವ | - | 228.76 | 228.76 |
| 08 | ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ | ರಾಜಸ್ವ | - | 633.42 | 633.42 |
| 09 | ಸಹಕಾರ | ರಾಜಸ್ವ | - | 8200.00 | 8200.00 |
| 10 | ಸಮಾಜ ಕಲ್ಯಾಣ | ರಾಜಸ್ವ | - | 847.92 | 847.92 |
| 11 | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ | ರಾಜಸ್ವ<br>ಬಂಡವಾಳ | - | 176.39<br>353.23 | 176.39<br>353.23 |

(ರೂ. ಲಕ್ಷಗಳಲ್ಲಿ)

| | | | | | |
|---|---|---|---|---|---|
| 13 | ಆಹಾರ ಮತ್ತು ನಾಗರಿಕ ಸರಬರಾಜು | ಬಂಡವಾಳ | - | 139.02 | 139.02 |
| 14 | ಕಂದಾಯ | ರಾಜಸ್ವ | - | 1847.77 | 1847.77 |
| 18 | ವಾಣಿಜ್ಯ ಮತ್ತು ಕೈಗಾರಿಕೆ | ರಾಜಸ್ವ<br>ಬಂಡವಾಳ | - | 602.03<br>956.97 | 602.03<br>956.97 |
| 19 | ನಗರಾಭಿವೃದ್ಧಿ | ರಾಜಸ್ವ<br>ಬಂಡವಾಳ | - | 4229.00<br>3527.00 | 4229.00<br>3527.00 |
| 20 | ಲೋಕೋಪಯೋಗಿ | ರಾಜಸ್ವ<br>ಬಂಡವಾಳ | - | 3475.35<br>1523.85 | 3475.35<br>1523.85 |
| 21 | ಜಲ ಸಂಪನ್ಮೂಲ | ಬಂಡವಾಳ | - | 2846.88 | 2846.88 |
| 22 | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು | ರಾಜಸ್ವ | - | 3107.30 | 3107.30 |
| 24 | ಇಂಧನ | ರಾಜಸ್ವ<br>ಬಂಡವಾಳ | - | 39683.00<br>2885.00 | 39683.00<br>2885.00 |
| 25 | ಕನ್ನಡ ಮತ್ತು ಸಂಸ್ಕೃತಿ | ರಾಜಸ್ವ | - | 25.00 | 25.00 |
| | ಒಟ್ಟು | ರಾಜಸ್ವ<br>ಬಂಡವಾಳ | **-**<br>**-** | **65415.14**<br>**16231.95** | **65415.14**<br>**16231.95** |
| | ಒಟ್ಟು ಮೊತ್ತ | | **-** | **81647.09** | **81647.09** |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**ಮ.ರಾ. ಹೆಗಡೆ**

ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.